**MVC:259/2023**
**P.W-1**

**<u>ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ</u>**

ದಿನಾಂಕಃ 28.01.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**<u>ಪಾಟೀ ಸವಾಲು: 1 ನೇ ಎದುರುದಾರರ ಪರ ವಕೀಲರಿಂದ</u>**

1 ನೇ ಎದುರುದಾರರ ಪರ ವಕೀಲರು ಗೈರು ಹಾಜರಾದ ಕಾರಣ, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಪಾಟೀ ಸವಾಲು: 2 ನೇ ಎದುರುದಾರರ ಪರ ವಕೀಲರಿಂದ</u>**

ನನ್ನ ಮಗಳು ಪುಷ್ಪಲತಾ ಅಪಘಾತವಾದ ಕಾಲಕ್ಕೆ ಪದವಿ ವ್ಯಾಸಂಗ ಮಾಡತ್ತಿದ್ದಳು. ಈ ಸಂಬಂಧವಾಗಿ ನಾನು ಯಾವುದೇ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ. ಆ ಕಾಲಕ್ಕೆ ನನ್ನ ಮಗಳಿಗೆ 20 ವರ್ಷವಾಗಿತ್ತು. ಇದಕ್ಕೆ ಸಂಬಂಧಪಟ್ಟ ದಾಖಲೆಗಳು ನನ್ನ ಬಳಿ ಇವೆ, ಹಾಜರುಪಡಿಸಬಲ್ಲೆ. ನನ್ನ ಮಗಳು ಕಾಲೇಜಿನ ಬಿಡುವಿನ ದಿನಗಳಲ್ಲಿ ಟೈಲರಿಂಗ್ ಕೆಲಸವನ್ನು ಮಾಡುತ್ತಿದ್ದಳು. ಈ ಸಂಬಂಧವಾಗಿ ಯಾವುದೇ ದಾಖಲೆಗಳು ಇಲ್ಲ. ನನ್ನ ಮಗಳಿಗೆ ರೂ.15,000/- ಆದಾಯ ಇತ್ತು ಎನ್ನುವುದು ಸುಳ್ಳು ಎಂದರೆ ಸರಿಯಲ್ಲ. ನನ್ನ ಮಗಳ ಸಾಗಾಣಿಕೆಯ ವೆಚ್ಚ ಮತ್ತು ಶವ ಸಂಸ್ಕಾರದ ವೆಚ್ಚ ರೂ.50,000/- ಗಳನ್ನು ಖರ್ಚು ಮಾಡಿದ್ದೇವೆ ಎಂದರೆ ಸರಿಯಲ್ಲ. ಅಪಘಾತ ಯಾರ ತಪ್ಪಿನಿಂದ ಆಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಕೆ.ಎಸ್.ಆರ್.ಟಿ.ಸಿ ಬಸ್ ನಿಂದ ಆಗಿದೆ ಎಂದು ತಿಳಿದುಕೊಂಡಿದ್ದೇನೆ. ನನ್ನ ಮಗಳು ಹೋಗುತ್ತಿದ್ದ ಆಟೋದಲ್ಲಿ 9 ಜನ ಇದ್ದರು ಎಂದರೆ ನನಗೆ ಗೊತ್ತಿಲ್ಲ. ನನ್ನ ಮಗಳು ಹೋಗುತ್ತಿದ್ದ ಆಟೋ ಮುಂದೆ ಮೋಟರ್ ಬೈಕ್ ಹೋಗುತ್ತಿತ್ತು ಎಂದರೆ ಸರಿಯಲ್ಲ. ಸದರಿ ಬೈಕ್ ಅನ್ನು ತಪ್ಪಿಸಲು ಹೋಗಿ ಆಟೋ ಡ್ರೈವರ್ ಬಸ್ ಗೆ ಡಿಕ್ಕಿ ಹೊಡೆದಿದ್ದೇನೆ ಎಂದರೆ ಸರಿಯಲ್ಲ. ಬಸ್ ಚಾಲಕನ ತಪ್ಪಿನಿಂದ ಅಪಘಾತ ಆಗಿಲ್ಲ ಎಂದರೆ ಸರಿಯಲ್ಲ. ಆಟೋ ಚಾಲಕನ ತಪ್ಪಿನಿಂದ ಅಪಘಾತ ಆಗಿದೆ ಎಂದರೆ ಸರಿಯಲ್ಲ. ಆಟೋ ಚಾಲಕ ಹೆಚ್ಚುವರಿ ಪ್ರಯಾಣಿಕರನ್ನು ತನ್ನ ಆಟೋದಲ್ಲಿ ಕೂರಿಸಿಕೊಂಡು ಹೋಗುತ್ತಿದ್ದ ಎನ್ನುವ ಕಾರಣದಿಂದ ಆತನ ವಿರುದ್ಧ ಪೋಲಿಸರು ಪ್ರಕರಣ ದಾಖಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಆಟೋ ನನ್ನ ಮಗನ ಹೆಸರಿನಲ್ಲಿ ಇತ್ತು. ಆಟೋ ಚಾಲಕನ ತಪ್ಪಿನಿಂದ ಅಪಘಾತ ಆಗಿದ್ದರು ಸಹ ಪರಿಹಾರ ಪಡೆಯಲಯ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನನ್ನ ಮಗನ ಚಾಲನ ಪರವಾನಗೆಯನ್ನು ಹೊಂದಿದ್ದ ಎಂಬುವುದಕ್ಕೆ ಸಂಬಂಧಿಸಿದಂತೆ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಆ ಬಗ್ಗೆ ನನಗೆ ಗೊತ್ತಿಲ್ಲ. ಕೆ.ಎಸ್.ಆರ್.ಟಿ.ಸಿ ಬಸ್ ನ ವಿರುದ್ಧ ಪರಿಹಾರಕ್ಕಾಗಿ ಸುಳ್ಳು ಪ್ರಕರಣವನ್ನು ದಾಖಲಿಸಿದ್ದೇವೆ ಎಂದರೆ ಸರಿಯಲ್ಲ. ಸದರಿ ಅಪಘಾತವು 1 ನೇ ಎದುರುದಾರರ

ತಪ್ಪಿನಿಂದ ಆಗದೇ ಇರುವ ಕಾರಣ 2 ನೇ ಎದುರುದಾರರು ಪರಿಹಾರ ನೀಡಲು ಬಾದಸ್ಥ ಅಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ).

**ಓ,ಹೇ,ಕೇ,ಸರಿ ಇದೆ.**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**